# ಗೋಹತ್ಯೆ ನಿಷೇಧಕ್ಕೆ ಅಸ್ತು

▪ **ವಿಕ ಸುದ್ದಿಲೋಕ** ಬೆಂಗಳೂರು

ಮುಂಬರುವ ಅಧಿವೇಶನದಲ್ಲಿ ಮಂಡನೆಯಾಗಲಿರುವ 'ಕರ್ನಾಟಕ ಗೋಹತ್ಯೆ ನಿಷೇಧ ಮತ್ತು ಜಾನುವಾರು ಸಂರಕ್ಷಣೆ ತಿದ್ದುಪಡಿ ವಿಧೇಯಕ'ಕ್ಕೆ ರಾಜ್ಯ ಸಚಿವ ಸಂಪುಟ ಬುಧವಾರ ಒಪ್ಪಿಗೆ ನೀಡಿದೆ.

ಗೋ ಸಂರಕ್ಷಣೆಗೆ ಸಂಬಂಧಿಸಿದಂತೆ 1964ರ ಕಾಯಿದೆಗೆ ಸಮಗ್ರ ತಿದ್ದುಪಡಿ ತರಲು ಸರಕಾರ ಉದ್ದೇಶಿಸಿದೆ. ಈ ಹಿನ್ನೆಲೆಯಲ್ಲಿ ವಿಧೇಯಕ ಸಿದ್ಧಪಡಿಸಲಾಗಿದೆ ಎಂದು ಗೃಹ ಸಚಿವ ಡಾ. ವಿ.ಎಸ್. ಆಚಾರ್ಯ ಸಂಪುಟ ಸಭೆ ಬಳಿಕ ಸುದ್ದಿಗಾರರಿಗೆ ತಿಳಿಸಿದರು.



ಗೋಹತ್ಯೆ ಮತ್ತು ಗೋವುಗಳ ಅಕ್ರಮ ಸಾಗಣೆ ತಪ್ಪಿಸುವುದು ಸರಕಾರದ ಉದ್ದೇಶ. ವಿಧೇಯಕದ ಮುಖ್ಯಾಂಶಗಳ ಪ್ರಕಾರ ಗೋವು ಸಾಗಣೆ ಶಿಕ್ಷಾರ್ಹ ಅಪರಾಧವಾಗಲಿದೆ. ಆರೋಪಿಗಳಿಗೆ ಒಂದು ವರ್ಷದಿಂದ ಏಳು ವರ್ಷದವರೆಗೆ ಶಿಕ್ಷೆ ವಿಧಿಸಲು ಅವಕಾಶ ಮಾಡಿಕೊಡಲಾಗಿದೆ. ಜತೆಗೆ ಮೊದಲ ಅಪರಾಧಕ್ಕೆ 25 ಸಾವಿರ ರೂ.ಗಳಿಂದ 50 ಸಾವಿರ ರೂ.ಗಳ ವರೆಗೆ ದಂಡ ವಿಧಿಸಲಾಗುವುದು. ಮತ್ತೆ ಅಪರಾಧವೆಸಗಿದರೆ ದಂಡದ ಮೊತ್ತ ಒಂದು ಲಕ್ಷ ರೂ.ಗಳಿಗೆ ಏರಿಕೆಯಾಗಲಿದೆ.

ಕೃಷಿ ಮತ್ತು ಹೈನುಗಾರಿಕೆ ಉದ್ದೇಶಕ್ಕೆ ಗೋವುಗಳನ್ನು ಸಾಗಿಸಲು ಯಾವುದೇ ಅಡ್ಡಿಯಿಲ್ಲ. ಆದರೆ, ಅದಕ್ಕೆ ತಹಸೀಲ್ದಾರ್ ಅಥವಾ ಉಪ ವಿಭಾಗಾಧಿಕಾರಿಯಿಂದ ಅನುಮತಿ ಪಡೆಯಬೇಕಾಗುತ್ತದೆ. ವಿಧೇಯಕದಲ್ಲಿ ಗೋ ಹತ್ಯೆ, ಕಸಾಯಿ ಖಾನೆಗೆ ಜಾನುವಾರು ಮಾರಾಟ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಕಾನೂನು ಉಲ್ಲಂಘನೆ ಶಿಕ್ಷಾರ್ಹ ಮಾತ್ರವಲ್ಲ ಜಾಮೀನು ರಹಿತ ಅಪರಾಧ. ವಾರಂಟ್ ಇಲ್ಲದೆ ಆರೋಪಿ ಗಳನ್ನು ದಸ್ತಗಿರಿ ಮಾಡಿ ಕೋರ್ಟ್‌ಗೆ ಹಾಜರು ಪಡಿಸಲು ಅವಕಾಶವಿದೆ.